**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ**

**ಸಿಸಿ ನಂ. 179/2019**

ಚಾಸಾ-2 ಫ್ರಾಸಾ-4

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 20-01-2026

| | | |
|---|---|---|
| ಹೆಸರು | : | ಸಿದ್ದಲಿಂಗ |
| ತಂದೆಯ ಹೆಸರು | : | ಮಲ್ಲಣ್ಣ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | : | ಕಲಬುರಗಿ |

-: **ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-**

ಚಾಸಾ 3 ಪರಿಚಯ ಇರುವುದಿಲ್ಲ.

ಸಾಕ್ಷಿಗೆ ಜಪ್ತಿ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಜಪ್ತಿ ಪಂಚನಾಮೆಯನ್ನು ಈಗಾಗಲೇ ನಿಪಿ-**3** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**3**(ಸಿ) ಎಂದು ಗುರುತಿಸಲಾಯಿತು.

ನಾನು ಒಂದು ದಿನ ಪೋಲಿಸ ಠಾಣೆ ಕಡೆ ಹೋದಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 02-04-2018 ರಂದು ಬೆಳಿಗ್ಗೆ 8 ಗಂಟೆಗೆ ಚಾಸಾ 1ರವರು ಕಚೇರಿ ಕರ್ತವ್ಯದಲ್ಲಿದ್ದಾಗ ಖಚಿತ ಭಾತ್ಮಿ ಬಂದಿರುತ್ತದೆ ಮತ್ತು ಸದರಿ ಭಾತ್ಮಿ ಬಂದ ನನಗೆ ಮತ್ತು ಚಾಸಾ 3 ರವರಿಗೆ ಕರೆಯಿಸಿ ತಮಗೆ ಬಂದ ಭಾತ್ಮಿ ತಿಳಿಸಿ ಪಂಚರಾಗಲು ಕೋರಿದ್ದು ಅದಕ್ಕೆ ನಾವು ಒಪ್ಪಿಕೊಂಡಿದರಿಂದ ನಾನು, ಚಾಸಾ 1, 3, ಸಿಬ್ಬಂದಿ ಕೂಡಿಕೊಂಡು ಭಾತ್ಮಿ ಬಂದ ಸ್ಥಳಕ್ಕೆ ಹೋಗಿರುತ್ತೇವೆ ಎಂದರೆ ಸರಿಯಲ್ಲ. ಆಗ ಆರೋಪಿ ನಮಗೆ ನೋಡಿ ಓಡಿಹೋಗಿರುತ್ತಾನೆ ಎಂದರೆ ಸರಿಯಲ್ಲ. ದಾಬಾದಲ್ಲಿ ಪರಿಶೀಲನೆ ಮಾಡುತ್ತಿರುವಾಗ ಒಂದು ರಟ್ಟಿನ ಪೆಟ್ಟಿಗೆಯಲ್ಲಿ 650 ML ನ 72 Kingfisher ಬಿಯರ ಬಾಟಲಿ ಮತ್ತು 650 ML ನ 16 ನಾಕೌಟ ಬಿಯರ ಬಾಟಲಿ ದೊರೆತಿರುತ್ತವೆ ಎಂದರೆ ಸರಿಯಲ್ಲ. ಅವುಗಳನ್ನು ನಮ್ಮ ಸಮಕ್ಷಮ ಜಪ್ತಿಪಡಿಸಿಕೊಂಡು ಅವುಗಳ ಮೇಲೆ ನಮ್ಮ ಸಹಿವುಳ್ಳ ಚೀಟಿ ಅಂಟಿಸಿರುತ್ತಾರೆ ಎಂದರೆ ಸರಿಯಲ್ಲ. ಈಗ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **RMS** ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ